ಮಧ್ಯಂತರ ಅರ್ಜಿಯ ಮೇಲೆ ಆದ ಆದೇಶದ ಮೇರೆಗೆ ಸಾಕ್ಷಿಯನ್ನು ಪುನಃ ಮುಂದಿನ ಮುಖ್ಯ ವಿಚಾರಣೆಗೆ ಕರೆಯಿಸಿ ದಿನಾಂಕ ***B 22.08.2025*** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ: ಅರ್ಜಿದಾರರ ಪರವಾಗಿ ಶ್ರೀ ಬಿ.ಪಿ.ಆರ್. ವಕೀಲರಿಂದ:-

*4.* ದಿಃ *04-10-2016* ರಂದು ತೋಟಗಾರಿಕೆ ಇಲಾಖೆಯವರು ನೀಡಿದ ಮಾಹಿತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***8*** ಎಂದು, ದಿಃ *06-08-2025* ರಂದು ತರೀಕೆರೆ ಎ.ಪಿ.ಎಂ.ಸಿ. ಕಾರ್ಯದರ್ಶಿರವರು ಸಾಕ್ಷಿಗೆ ನೀಡಿರುವ ಬೆಳೆಗಳ ಧಾರಣೆ ಮಾಹಿತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***9*** ಎಂದು, ದಿಃ *26-08-2016* ರ ಬೆಂಗಳೂರು ಆಪ್‌ಕಾಂಸ್‌ನ ಸಾರ್ವಜನಿಕ ಮಾಹಿತಿ ಅಧಿಕಾರಿಯವರು ಬಾದಾಮಿ ಮಾವಿನ ಹಣ್ಣಿನ ಬಗ್ಗೆ ನೀಡಿರುವ ಮಾಹಿತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.***10*** ಎಂದು, ದಿಃ *04-08-2022* ರಂದು ತರೀಕೆರೆ ಎ.ಪಿ.ಎಂ.ಸಿ. ಕಾರ್ಯದರ್ಶಿರವರು ಸಾಕ್ಷಿಗೆ ನೀಡಿರುವ *2011-2012* ರಿಂದ *2021-2022* ನೇ ಸಾಲಿನ ಕೃಷಿ ಉತ್ಪನ್ನಗಳ ಮಾರುಕಟ್ಟೆ ವಿವರದ ತಃಖ್ತೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.***11*** ಎಂದು, *2010-2011* ರಿಂದ ಪ್ರಸ್ತುತ ಸಾಲಿನವರೆಗಿನ ಹಳಿಯೂರು ಗ್ರಾಮಕ್ಕೆ ಸಂಬಂಧಿಸಿದ ತರೀಕೆರೆ ಉಪ ನೋಂದಣಾಧಿಕಾರಿಯವರು ನೀಡಿರುವ ಪರಿಷ್ಕೃತ ದರಗಳ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.***12*** ಎಂದು ಮತ್ತು *2010-2011* ರಿಂದ ಪ್ರಸ್ತುತ ಸಾಲಿನವರೆಗಿನ ಚಾಕೋನಹಳ್ಳಿ ಗ್ರಾಮಕ್ಕೆ ಸಂಬಂಧಿಸಿದ ತರೀಕೆರೆ ಉಪ ನೋಂದಣಾಧಿಕಾರಿಯವರು ನೀಡಿರುವ ಪರಿಷ್ಕೃತ ದರಗಳ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.***13*** ಎಂದು ಗುರುತಿಸಲಾಯಿತು.

**(**ಪಾಟೀ ಸವಾಲು:

**(**ಎದುರುದಾರರ ಪರ ವಕೀಲರ ಕೋರಿಕೆ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಾಯಿತು**)**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ